ಶಾಸನ ರಚನಾ ಕಾರ್ಯಕಲಾಪಗಳು

1992ರ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆ ನಿಷೇಧ) (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) : ಮಾನ್ಯ ಉಪಾಧ್ಯಕ್ಷೀಣಿಯವರೇ, 1992ರ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ, 1992ರ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೇ 1992ರ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಈಗ ಸಭೆಯನ್ನು ಮುಂದೂಡಿ ಮತ್ತೆ ಮಧ್ಯಾಹ್ನ 2-30 ಗಂಟೆಗೆ ಸಮಾವೇಳಗೊಳ್ಳುವುದು.

(ಸಭೆಯು ಪುನಃ 3-05 ಗಂಟೆಗೆ ಸಮಾವೇಶಗೊಂಡಿತು)

ಉಪಾಧ್ಯಕ್ಷೀಣಿಯವರು ಅಧ್ಯಕ್ಷರ ಪೀಠವನ್ನು ಅಲಂಕರಿಸಿದರು

ವಿರೋಧ ಪಕ್ಷದವರು ಸದನದ ಕಾರ್ಯಕಲಾಪಗಳಲ್ಲಿ ಭಾಗವಹಿಸಲು ಮನವಿ

† ಶ್ರೀ ಕೆ.ಎಸ್. ಈಶ್ವರಪ್ಪ : ಮಾನ್ಯ ಉಪಾಧ್ಯಕ್ಷೀಣಿಯವರೆ, ವಿರೋಧ ಪಕ್ಷದವರು ಸಭೆಗೆ ಬರಬೇಕೆಂದು ಅನೇಕ ದಿನಗಳಿಂದಲೂ ಕೇಳುತ್ತಿದ್ದೇವೆ. ಈ ಸರ್ಕಾರ ಇದರ ಬಗ್ಗೆ ಏನು ಕ್ರಮ ಕೈಗೊಂಡಿದೆ. ವಿರೋಧ ಪಕ್ಷವನ್ನು ಪೂರ್ಣ ತಾತ್ಸಾರ ಮಾಡಿಬಿಟ್ಟು, ಪೂರ್ಣ ಸದನವನ್ನು ಇದೇ ರೀತಿ ಮುಂದುವರಿಸಬೇಕೆಂದು ತೀರ್ಮಾನವಾಗಿದೆಯೇ? ಅಥವಾ ವಿರೋಧ ಪಕ್ಷಗಳನ್ನು ಹತ್ತಿಕ್ಕಬೇಕೆಂದು ಏನಾದರೂ ನಡೆದಿದೆಯೇ? ಏಕೆಂದರೆ ಬಜೆಟ್ ಲೀಕೇಜ್ ಆದಾಗಿನಿಂದಲೂ ನಾವು ಕೇಳುತ್ತಿದ್ದೇವೆ.

(ಗೊಂದಲ)

ಶ್ರೀ ಕೆ.ಎಸ್. ಈಶ್ವರಪ್ಪ : ಇಂತಹ ಸಂದರ್ಭದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಗಮನ ಕೊಡುತ್ತಿರೋ ಬಿಡುತ್ತೀರೋ ನಮಗೆ ಅರ್ಥವಾಗುತ್ತಿಲ್ಲ. ವಿರೋಧ ಪಕ್ಷ ಇದೇ ರೀತಿ ಇರಬೇಕೆಂದು ಸರ್ಕಾರ ತೀರ್ಮಾನ ಮಾಡಿದೇಯೇ? ವಿರೋಧ ಪಕ್ಷ ಇಲ್ಲದೇ ಒಂದು ರೀತಿಯ ಸರ್ವಾಧಿಕಾರದಲ್ಲೇ ಸರ್ಕಾರ ನಡೆಯಬೇಕೆಂದು ಮಂತ್ರಿಮಂಡಲದವರು ತೀರ್ಮಾನ ಮಾಡಿದ್ದಾರೆಯೇ ಏನೆಂದು ಬಹಿರಂಗವಾಗಿ ಹೇಳಿದರೆ ಇಡೀ ಕರ್ನಾಟಕ ರಾಜ್ಯದ ಜನಕ್ಕೂ ಅರ್ಥವಾಗುತ್ತದೆ. ಭಾರತೀಯ ಜನತಾ